ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

1995ರ ನಂತರದ ಶಾಲಾ-ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

ಶ್ರೀ ಕೆ. ಟಿ. ಶ್ರೀಕಂಠೇಗೌಡ(ಪದವೀಧರರ ಕ್ಷೇತ್ರ) –

71 (22) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) 1995ರ ನಂತರ ಪ್ರಾರಂಭವಾದ ಶಾಲಾ-ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಈ ಶಾಲಾ ಕಾಲೇಜುಗಳಲ್ಲಿ ಕಳೆದ 25 ವರ್ಷಗಳಿಂದ ಸಿಬ್ಬಂದಿಗಳು ಕಡಿಮೆ ವೇತನಕ್ಕೆ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಇವರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ 1995ರ ನಂತರ ಶಾಲಾ-ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ವೇತನಾನುದಾನಕ್ಕೆ ಒಳಪಡಿಸಲಾಗುವುದು ಯಾವಾಗ? (ಮಾಹಿತಿ ಒದಗಿಸುವುದು)